## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.**325/2021**

ಸಾಕ್ಷಿದಾರರ ಹೇಳಿಕೆಃ

**ಹೆಸರು** : ಬಿ ವಿ ಲಕ್ಷ್ಮಣ ಚಾಸಾಃ **11** ಪ್ರಾಸಾಃ **8**

**ತಂದೆಯ ಹೆಸರು** : ವೀರಪ್ಪ

**ವಯಸ್ಸು** : 44 ವರ್ಷ

**ವೃತ್ತಿ** : ಮುಖ್ಯ ಪೇದೆ

**ವಾಸಸ್ಥಳ** : ದಾವಣಗೆರೆ

ದಿನಾಂಕಃ **15-04-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ನಾನು 2014 ರಿಂದ 2021 ರವರೆಗೆ ಹೊನ್ನಾಳಿ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಪೇದೆ ಮತ್ತು ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿದ್ದೇನು.

ದಿಃ 06-01-2021 ರಂದು ರಾತ್ರಿ 08-00 ಗಂಟೆ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿ ಪ್ರಕರಣವನ್ನು ದಾಖಲು ಮಾಡಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಪ್ರತಿಯನ್ನು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿಃ 07-01-2021 ರಂದು ಅಪಘಾತವಾದ ಸ್ಥಳಕ್ಕೆ ಭೇಟಿ ನೀಡಿ ಚಾಸಾ-2 ಮತ್ತು 3 ರವರಿಗೆ ನೋಟೀಸನ್ನು ಜಾರಿ ಮಾಡಿ ನಂತರ ಚಾಸಾ-1 ರವರು ಸ್ಥಳ ತೋರಿಸಿದ ಮೇರೆಗೆ ಸ್ಥಳ ಮಹಜರ್ ಕ್ರಮವನ್ನು ಬೆಳಗ್ಗೆ 11-00 ರಿಂದ 12-00 ಗಂಟೆ ಸಮಯದಲ್ಲಿ ಚಾಸಾ-1 ರಿಂದ 3

ರವರ ಸಮಕ್ಷಮ ಮಹಜರ್ ಕ್ರಮ ಜರುಗಿಸಿ, ಕಚ್ಚ ನಕಾಶೆಯನ್ನು ತಯಾರಿಸಿ, ಛಾಯಾಚಿತ್ರಗಳನ್ನು ತೆಗೆದಿರುತ್ತೇನೆ.

ನಂತರ ಠಾಣೆಗೆ ವಾಪಾಸ್ಸು ಬಂದು ಹೊನ್ನಾಳಿ ಠಾಣೆಯ ವಸತಿ ಗೃಹದಲ್ಲಿ ಅಪಘಾತಕ್ಕೀಡಾದ ಮೋಟಾರ್ ಸೈಕಲ್ ನಂ.ಕೆಎ-17/ಹೆಚ್ ಬಿ-9641 ಬಜಾಜ್ ಡಿಸ್ಕವರಿ ಬೈಕ್ ಮತ್ತು ಗೂಡ್ಸ್ ಆಟೋ ನಂ.ಕೆಎ-17/ಬಿ-6320 ಅನ್ನು ಅಮಾನತ್ತು ಪಡಿಸಿಕೊಳ್ಳಲು ಚಾಸಾ-2 ಮತ್ತು 3 ರವರಿಗೆ ನೋಟೀಸನ್ನು ಜಾರಿ ಮಾಡಿ ನಂತರ ಚಾಸಾ-1 ರಿಂದ 3 ರವರ ಸಮಕ್ಷಮ ಅಮಾನತ್ತು ಮಹಜರ್ ಕ್ರಮವನ್ನು ಮದ್ಯಾಹ್ನ 01-00 ರಿಂದ 02-00 ಗಂಟೆ ಸಮಯದಲ್ಲಿ ಜರುಗಿಸಿ ಛಾಯಾಚಿತ್ರಗಳನ್ನು ತೆಗೆದಿರುತ್ತೇನೆ. ಚಾಸಾ-10 ರವರು ಮಹಜರ್ ಸಮಯದಲ್ಲಿ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ.

ದಿಃ 11-01-2021 ರಂದು ಆರೋಪಿಗೆ ನೋಟೀಸನ್ನು ಜಾರಿ ಮಾಡಿ ಅವರಿಂದ ಪ್ರತ್ಯುತ್ತರವನ್ನು ಪಡೆದುಕೊಂಡಿದ್ದು ಮತ್ತು ಸದರಿ ಪ್ರತ್ಯುತ್ತರದಲ್ಲಿ ಆರೋಪಿಯು ಚಾಲನ ಪರವಾನಿಗೆ ಇಲ್ಲದ ಕಾರಣ ವಾಹನವನ್ನು ಸ್ವತ್ತಿನ ಪಟ್ಟಿಯಲ್ಲಿ ನಮೂದು ಮಾಡಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಆರೋಪಿಯು ಸ್ವ ಇಚ್ಚೆಯಿಂದ ಠಾಣೆಗೆ ಹಾಜರಾಗಿದ್ದರಿಂದ ಆರೋಪಿಯ ವಿರುದ್ಧ ದಸ್ತಗಿರಿ ಕ್ರಮವನ್ನು ಅನುಸರಿಸಿ ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ.

ದಿಃ 15-01-2021 ರಂದು ಚಾಸಾ-4 ರವರಿಗೆ ನೋಟೀಸನ್ನು ಜಾರಿ ಮಾಡಿ ಮೋಟಾರ್ ಸೈಕಲ್ ನಂ.ಕೆಎ-17/ಹೆಚ್ ಬಿ-9641 ಬೈಕ್ ಗೆ ಸಂಬಂಧಪಟ್ಟಂತೆ ದಾಖಲೆಗಳನ್ನು ಹಾಜರುಪಡಿಸುವಂತೆ ತಿಳಿಸಿದ್ದು ನಂತರ ಚಾಸಾ-4 ರವರಿಂದ ಪ್ರತ್ಯುತ್ತರ, ನಷ್ಟಭರ್ತಿ ಮತ್ತು ದಾಖಲಾತಿಗಳನ್ನು ಪಡೆದುಕೊಂಡು ವಾಹನವನ್ನು ಅವರ ವಶಕ್ಕೆ ಬಿಟ್ಟುಕೊಟ್ಟಿರುತ್ತೇನೆ. ನಂತರ ಚಾಸಾ-4 ರಿಂದ 7 ರವರ ಹೇಳಿಕೆ ಮತ್ತು ಮುಚ್ಚಳಿಕೆ ಪತ್ರಗಳನ್ನು ಪಡೆದುಕೊಂಡಿರುತ್ತೇನೆ.

ದಿಃ 20-01-2021 ರಂದು ಚಾಸಾ-9 ರವರಿಗೆ ಮನವಿಯನ್ನು ಸಲ್ಲಿಸಿ ಅವರಿಂದ ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ದಿಃ 20-02-2021 ರಂದು ಪಡೆದುಕೊಂಡಿರುತ್ತೇನೆ. ದಿಃ 11-01-2021 ರಂದು ಚಾಸಾ-8 ರವರಿಗೆ ಅಪಘಾತಕ್ಕೀಡಾದ ವಾಹನಗಳ ವರದಿಯನ್ನು

ನೀಡುವಂತೆ ಮನವಿಯನ್ನು ಸಲ್ಲಿಸಿ ನಂತರ ದಿಃ 04-02-2021 ರಂದು ಚಾಸಾ-8 ರವರಿಂದ ಐ ಎಂ ವಿ ವರದಿಯನ್ನು ಸ್ವೀಕರಿಸಿರುತ್ತೇನೆ. ಚಾಸಾ-2 ಮತ್ತು 3 ರವರ ಹೇಳಿಕೆ ಮತ್ತು ಚಾಸಾ-2 ರವರ ಮರುಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ.

ದಿಃ 07-01-2021 ರಂದು ಚಾಸಾ-10 ರವರಿಂದ 65 ಬಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ನಂತರ ತನಿಖೆಯಿಂದ ಆರೋಪಿಯ ವಿರುದ್ಧ ಆರೋಪ ಸಾಬೀತಾಗಿದ್ದರಿಂದ, ದೋಷರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು, ಸ್ಥಳ ಮಹಜರ್ ಅನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು, ಕಚ್ಚ ನಕಾಶೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-3(ಡಿ) ಎಂದು, ನಿಪಿ-4 ಮತ್ತು 5 ಛಾಯಾಚಿತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಅಮಾನತ್ತು ಮಹಜರ್ ಅನ್ನು ಈಗಾಗಲೇ ನಿಪಿ-6 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-6(ಡಿ) ಎಂದು, ನಿಪಿ-7 ಮತ್ತು 8 ಛಾಯಾಚಿತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಸ್ಥಳ ಮಹಜರ್ ಮತ್ತು ಅಮಾನತ್ತು ಮಹಜರ್ ಸಮಯದಲ್ಲಿ ನೀಡಿದ ನೊಟೀಸುಗಳನ್ನು ಈಗಾಗಲೇ ನಿಪಿ-10 ಮತ್ತು 11 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಗಳನ್ನು ನಿಪಿ-10(ಸಿ ) ಮತ್ತು 11(ಸಿ) ಎಂದು, ಚಾಸಾ-3 ರವರ ಹೇಳಿಕೆಯನ್ನು ಈಗಾಗಲೇ ನಿಪಿ-12 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು, ಚಾಸಾ-4 ರವರು ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ಈಗಾಗಲೇ ನಿಪಿ-13 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-13(ಬಿ) ಎಂದು, ಚಾಸಾ-4 ರವರ ಹೇಳಿಕೆಯನ್ನು ಈಗಾಗಲೇ ನಿಪಿ-14 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು, ಚಾಸಾ-5 ರವರ ಹೇಳಿಕೆಯನ್ನು ಈಗಾಗಲೇ ನಿಪಿ-15 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು, ಚಾಸಾ-6 ರವರ ಮುಚ್ಚಳಿಕೆ ಪತ್ರವನ್ನು ಈಗಾಗಲೇ ನಿಪಿ-16 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-16(ಬಿ) ಎಂದು, ಚಾಸಾ-6 ರವರ ಹೇಳಿಕೆಯನ್ನು ಈಗಾಗಲೇ ನಿಪಿ-17 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-17(ಎ) ಎಂದು, ಚಾಸಾ-2 ರವರ ಹೇಳಿಕೆಯನ್ನು ಈಗಾಗಲೇ ನಿಪಿ-18 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-18(ಎ) ಎಂದು, ಚಾಸಾ-2 ರವರ ಮರುಹೇಳಿಕೆಯನ್ನು ಈಗಾಗಲೇ ನಿಪಿ-19 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-19(ಎ) ಎಂದು, ಚಾಸಾ-7 ರವರು

ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ಈಗಾಗಲೇ ನಿಪಿ-20 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-20(ಬಿ) ಎಂದು, ಚಾಸಾ-7 ರವರ ಹೇಳಿಕೆಯನ್ನು ಈಗಾಗಲೇ ನಿಪಿ-21 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-21(ಎ) ಎಂದು, ಪ್ರಥಮ ವರ್ತಮಾನ ವರದಿಯನ್ನು ನಿಪಿ-22 ಎಂದು, ಸಾಕ್ಷಿಯ ಸಹಿಯನ್ನು ನಿಪಿ-22(ಎ) ಎಂದು, ಚಾಸಾ-1 ರವರು ಚಿಕಿತ್ಸೆ ಪಡೆದ ಬಗ್ಗೆ ಚಾಸಾ-9 ರವರು ನೀಡಿದ ವರದಿಯನ್ನು ನಿಪಿ-23 ಎಂದು, ಸಾಕ್ಷಿಯ ಸಹಿಯನ್ನು ನಿಪಿ-23(ಎ) ಎಂದು, ಚಾಸಾ-9 ರವರಿಗೆ ನೀಡಿದ ಮನವಿಯನ್ನು ನಿಪಿ-24 ಎಂದು, ಸಾಕ್ಷಿಯ ಸಹಿಯನ್ನು ನಿಪಿ-24(ಎ) ಎಂದು, ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ನಿಪಿ-25 ಎಂದು, ಸಾಕ್ಷಿಯ ಸಹಿಯನ್ನು ನಿಪಿ-25(ಎ) ಎಂದು, ಚಾಸಾ-8 ರವರು ನೀಡಿದ ಐ ಎಂ ವಿ ವರದಿಗಳನ್ನು ನಿಪಿ-26 ಮತ್ತು 27 ಎಂದು, ಸಾಕ್ಷಿಯ ಸಹಿಯನ್ನು ನಿಪಿ-26(ಎ) ಮತ್ತು 27(ಎ) ಎಂದು, 65 ಬಿ ಪ್ರಮಾಣ ಪತ್ರವನ್ನು ನಿಪಿ-28 ಎಂದು, ಸಾಕ್ಷಿಯ ಸಹಿಯನ್ನು ನಿಪಿ-28(ಎ) ಎಂದು, ಚಾಸಾ-4 ರವರಿಗೆ ನೀಡಿದ ನೋಟೀಸನ್ನು ನಿಪಿ-29 ಎಂದು, ಸಾಕ್ಷಿಯ ಸಹಿಯನ್ನು ನಿಪಿ-29(ಎ) ಎಂದು, ಚಾಸಾ-4 ರವರು ನೀಡಿದ ಪ್ರತ್ಯುತ್ತರವನ್ನು ನಿಪಿ-30 ಎಂದು, ಸಾಕ್ಷಿಯ ಸಹಿಯನ್ನು ನಿಪಿ-30(ಎ) ಎಂದು, ಚಾಸಾ-4 ರವರು ಬರೆದುಕೊಟ್ಟ ನಷ್ಟಭರ್ತಿ ಮುಚ್ಚಳಿಕೆಯನ್ನು ನಿಪಿ-31 ಎಂದು, ಸಾಕ್ಷಿಯ ಸಹಿಯನ್ನು ನಿಪಿ-31(ಎ) ಎಂದು, ಆರೋಪಿಗೆ ನೀಡಿದ ನೋಟೀಸನ್ನು ನಿಪಿ-32 ಎಂದು, ಸಾಕ್ಷಿಯ ಸಹಿಯನ್ನು ನಿಪಿ-32(ಎ) ಎಂದು, ಆರೋಪಿ ಬರೆದುಕೊಟ್ಟ ಪ್ರತ್ಯುತ್ತರವನ್ನು ನಿಪಿ-33 ಎಂದು, ಸಾಕ್ಷಿಯ ಸಹಿಯನ್ನು ನಿಪಿ-33(ಎ) ಎಂದು, ಆರೋಪಿ ಬರೆದುಕೊಟ್ಟ ನಷ್ಟಭರ್ತಿ ಮುಚ್ಚಳಿಕೆ ಪತ್ರವನ್ನು ನಿಪಿ-34 ಎಂದು, ಸಾಕ್ಷಿಯ ಸಹಿಯನ್ನು ನಿಪಿ-34(ಎ) ಎಂದು ಗುರುತಿಸಲಾಯಿತು. ಆರೋಪಿ ಗೈರು ಹಾಜರಾಗಿದ್ದು ಆತನನ್ನು ಗುರುತಿಸುವ ಬಗ್ಗೆ ಆತನ ಪರ ವಕೀಲರು ಯಾವುದೇ ತಕರಾರ ಇಲ್ಲ ಎಂದು ತಿಳಿಸಿರುತ್ತಾರೆ.

ಪಾಟೀ ಸವಾಲು:- ಆರೋಪಿ ಪರ ವಕೀಲರರಿಂದ:-

ಚಾಸಾ-1 ರವರು ಹೇಳಿದ ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಪ್ರ.ವ.ವರದಿಯನ್ನು ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ. ಅಪಘಾತವಾದ ಸ್ಥಳಕ್ಕೆ ಭೇಟಿ ನೀಡಿಲ್ಲ ಪಂಚರಿಗೆ ನೋಟೀಸನ್ನು ಜಾರಿ ಮಾಡಿಲ್ಲ ಮತ್ತು ಸ್ಥಳ ಮಹಜರ್ ಕ್ರಮ ಜರುಗಿಸಿಲ್ಲ, ಕಚ್ಚ ನಕಾಶೆಯನ್ನು ತಯಾರಿಸಿಲ್ಲ ಮತ್ತು ಛಾಯಾಚಿತ್ರಗಳನ್ನು ತೆಗೆದಿಲ್ಲ ಎಂದರೆ ಸರಿಯಲ್ಲ. ಪಂಚರಿಗೆ ನೋಟೀಸನ್ನು ಜಾರಿ ಮಾಡಿಲ್ಲ ಮತ್ತು ವಾಹನಗಳನ್ನು ಅಮಾನತ್ತು ಪಡಿಸಿಕೊಂಡು ಅಮಾನತ್ತು ಮಹಜರ್ ಕ್ರಮ ಜರುಗಿಸಿ, ಛಾಯಾಚಿತ್ರಗಳನ್ನು ತೆಗೆದಿಲ್ಲ ಎಂದರೆ ಸರಿಯಲ್ಲ. ವಾಹನಗಳ ತಪಾಸಣೆ ಯನ್ನು ಮಾಡಲು

ಸಾರಿಗೆ ಅಧಿಕಾರಿಗಳಿಗೆ ಮನವಿಯನ್ನು ಸಲ್ಲಿಸಿಲ್ಲ ಮತ್ತು ಐ ಎಂ ವಿ ವರದಿಯನ್ನು ಸ್ವೀಕರಿಸಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರ ಗಾಯದ ಪ್ರಮಾಣ ಪತ್ರಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ವಾಹನಗಳ ಮಾಲೀಕರಿಗೆ ನೋಟೀಸನ್ನು ಜಾರಿ ಮಾಡಿಲ್ಲ ಮತ್ತು ಅವರಿಂದ ಪ್ರತ್ಯುತ್ತರ ಮತ್ತು ನಷ್ಟ ಭರ್ತಿ ಮುಚ್ಚಳಿಕೆ ಪತ್ರವನ್ನು ಪಡೆದುಕೊಂಡು ಅವರ ವಶಕ್ಕೆ ಬಿಟ್ಟುಕೊಟ್ಟಿಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆ, ಮರುಹೇಳಿಕೆ ಮತ್ತು ಮುಚ್ಚಳಿಕೆ ಪತ್ರಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿಯನ್ನು ದಸ್ತಗಿರಿ ಮಾಡಿಲ್ಲ ಮತ್ತು ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಚಾಸಾ-1 ರವರ ಸುಳ್ಳು ದೂರಿನ ಮೇರೆಗೆ ಸುಳ್ಳು ಪ್ರಕರಣವನ್ನು ದಾಖಲು ಮಾಡಿ, ಸುಳ್ಳು ತನಿಖೆಯನ್ನು ನಡೆಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ .

**ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.**

**ಓ. ಹೇ. ಕೇ. ಸ. ಇದೆ.**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ., ಹೊನ್ನಾಳಿ.**